6. ಚುನಾವಣಾ ಪ್ರಸ್ತಾವಗಳು

ಶ್ರೀ ವೀರಪ್ಪ ಮೊಯಿಲಿ : (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೇ, ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಚುನಾವಣಾ ಪ್ರಸ್ತಾವಗಳನ್ನು ಮಂಡಿಸಲು ಇಷ್ಟಪಡುತ್ತೇನೆ.

ಅ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 265 (1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಲೆಕ್ಕ ಪತ್ರಗಳ ಸಮಿತಿ ಹನ್ನೆರಡು ಜನ ಸದಸ್ಯರನ್ನು ಚುನಾಯಿಸುವುದು.

ಆ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 268(1)ನೇ ನಿಯಮದ ಅನುಸಾರವಾಗಿ ಈ ಸಭೆ ಅಂದಾಜುಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸುವುದು.

ಇ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 271(1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು ಚುನಾಯಿಸುವುದು.

ಈ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 272(1)ನೇ ನಿಯಮದ ಅನುಸಾರವಾಗಿ ಈ ಸಭೆ ಹಕ್ಕು ಭಾದ್ಯತಾ ಸಮಿತಿಗೆ ಏಳು ಜನ ಸದಸ್ಯರನ್ನು ಚುನಾಯಿಸುವುದು.

ಉ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 277(1)ನೇ ನಿಯಮದ ಅನುಸಾರವಾಗಿ ಈ ಸಭೆ ಅಧೀನ ಶಾಸನ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸುವುದು.

ಊ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 282(1)ನೇ ನಿಯಮದ ಅನುಸಾರವಾಗಿ ಈ ಸಭೆ ಸರ್ಕಾರಿ ಭರವಸೆಗಳ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸುವುದು.

ಋ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 283(1)ನೇ ನಿಯಮದ ಅನುಸಾರವಾಗಿ ಈ ಸಭೆ ಖಾಸಗಿ ಸದಸ್ಯರ ವಿಧೇಯಕಗಳ ಹಾಗೂ ನಿರ್ಣಯಗಳ ಸಮಿತಿಗೆ ಹತ್ತು ಜನ ಸದಸ್ಯರನ್ನು ಚುನಾಯಿಸುವುದು.

ಋ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 286ನೇ ನಿಯಮದ ಅನುಸಾರವಾಗಿ ಸಭೆ ಅನುಸೂಚಿತ ಜಾತಿ ಹಾಗೂ ಅನುಸೂಚಿತ ಅದಿಮ ಜಾತಿಯವರ ಕಲ್ಯಾಣ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು ಚುನಾಯಿಸುವುದು.

ಎ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿ ನಿಯಮಗಳ 288ನೇ ನಿಯಮದ ಅನುಸಾರವಾಗಿ ಈ ಸಭೆ ಹಿಂದುಳಿದ ವರ್ಗಗಳ ಕಲ್ಯಾಣ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು ಚುನಾಯಿಸುವುದು.

ಏ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 353(2)ನೇ ನಿಯಮದ ಅನುಸಾರವಾಗಿ ಈ ಸಭೆ ವಸತಿ ಸೌಕರ್ಯಗಳ ಸಮಿತಿಗೆ ಎಂಟುಜನ ಸದಸ್ಯರನ್ನು ಚುನಾಯಿಸುವುದು.

ಐ) 1965ನೇ ಇಸವಿಯ ಕರ್ನಾಟಕ ಸಾರ್ವಜನಿಕ ಗ್ರಂಥಾಲಯಗಳ ನಿಯಮ 3(2)ರ ಪ್ರಕಾರ ಈ ಸಭೆ ರಾಜ್ಯ ಗ್ರಂಥಾಲಯ ಪ್ರಾಧಿಕಾರದ ಸಮಿತಿಗೆ ನಾಲ್ಕು ಜನ ಸದಸ್ಯರನ್ನು ಚುನಾಯಿಸುವುದು.

ಛೇರ್ಮನ್ : ಚುನಾವಣಾ ಪ್ರಸ್ತಾವಗಳನ್ನು ಮಂಡಿಸಲಾಯಿತು. ಈಗ ಗಮನ ಸೆಳೆಯುವ ಸೂಚನೆಗಳಿಗೆ ಸಂಬಂಧ ಪಟ್ಟ ಸದಸ್ಯರುಗಳು ಸಭೆಯಲ್ಲಿ ಇಲ್ಲದಿರುವುದರಿಂದ ನಿಯಮ 334ರ ಮೇರೆಗೆ ಈಗ ಬಸವಂತರೆಡ್ಡಿ ಮೊತಕಪಲ್ಲಿ ಅವರು ವಿಷಯ ಪ್ರಸ್ತಾಪ ಮಾಡಬಹುದು.

ನಿಯಮ 334ರ ಮೇರೆಗೆ

ಗುಲ್ಬರ್ಗಾ ಜಿಲ್ಲೆಯಲ್ಲಿ ಆಂಧ್ರಗಡಿ ಪ್ರಾಂತ್ಯದ ರಸ್ತೆಗಳ ಅಭಿವೃದ್ಧಿ ಕುರಿತು

ಶ್ರೀ ಬಸವಂತರೆಡ್ಡಿ ಮತಕಪಲ್ಲಿ (ಸೇಡಂ) : ಗುಲ್ಬರ್ಗ ಜಿಲ್ಲೆಯ ಸೇಡಂ ತಾಲ್ಲೂಕ್ ಆಂಧ್ರ ಗಡಿಪ್ರಾಂತ್ಯದಲ್ಲಿದ್ದು, ಗಡಿಪ್ರಾಂತ್ಯದ ರಸ್ತೆಗಳು ಸಂಚಾರಕ್ಕೆ ತೊಂದರೆಯಾದ ಕಾರಣ ಗಡಿ ಪ್ರಾಂತ್ಯದ ರಸ್ತೆಗಳ ವರದಿಯನ್ನು ನಾನು ಪತ್ರಗಳ ಮುಖಾಂತರ ತಿಳಿಸಿದರೆ ಅಂದಿನ ಲೋಕೋಪಯೋಗಿ ಸಚಿವರು, ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ ನಂ.1 ಹಾಗೂ ಅಂದಿನ ಹೈದ್ರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿಯವರಿಗೆ ಕ್ರಮ ಕೈಗೊಳ್ಳಲು ತಿಳಿಸಿದ್ದಾರೆ. ಅಲ್ಲದೆ ಮಾನ್ಯ ಮುಖ್ಯಮಂತ್ರಿಗಳ ಕಾರ್ಯಾಲಯದಿಂದ ಪತ್ರ ನಂ.1802 ಎಂಎಲ್ಎ (2)90- ದಿನಾಂಕ 4.1.91ರಂದು ನನಗೆ ಪತ್ರ ಮುಖಾಂತರ ತಿಳಿಸಿ ಆ ಪತ್ರದಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳು ಉನ್ನತ ಅಧಿಕಾರಿ ಸಮಿತಿ, ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿ ಇವರನ್ನು ಪರಿಶೀಲಿಸಿ, ಕ್ರಮ ಕೈಗೊಳ್ಳಲು ವಿನಂತಿಸಲಾಗಿದೆ ಎಂದು ತಿಳಿಸಿದ್ದಾರೆ. ಈ ಗಡಿ ಪ್ರಾಂತ್ಯಗಳ ರಸ್ತೆಗಳ ಬಗ್ಗೆ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಹಾಗೂ ಜಿಲ್ಲಾ ಪರಿಷತ್‌ನ ಇಂಜನೀಯರಿಂಗ್ ವಿಭಾಗದ ಅಧಿಕಾರಿಗಳು ಸಹ ಸರ್ಕಾರದ ಆದೇಶದ ಪ್ರಕಾರ ವರದಿಯನ್ನು ಕಳುಹಿಸಿದ್ದಾರೆ. ಇಲ್ಲಿಯವರೆಗೆ ಯಾವ ಕ್ರಮ ಕೈಗೊಂಡಿಲಿಲ. ನನ್ನ ಈ ಕ್ಷೇತ್ರದ ಜನರು ನೆರೆರಾಜ್ಯ ಗಡಿ ಪ್ರಾಂತ್ಯ ರಸ್ತೆಗಳನ್ನು ಮತ್ತು ಆಂಧ್ರಪ್ರದೇಶದಲ್ಲಿ ಹಳ್ಳಿಹಳ್ಳಿಗೂ ಬಸ್ಸುಗಳನ್ನು ನಡೆಸುವುದನ್ನು ನೋಡಿ ತೆಲುಗು ಮಾತನಾಡುವ ಜನರಿಗೆ ನಮ್ಮ ಕರ್ನಾಟಕ ಸರ್ಕಾರ ನಮ್ಮ ಈ ಭಾಗವನ್ನು ಅಲಕ್ಷಿಸಿದೆ ಎಂದು ಭಾವಿಸುತ್ತಾರೆ.

ಇದರ ಬಗ್ಗೆ ಆ ಭಾಗದ ಜನರು ತಮ್ಮ ಭಾವನೆಯನ್ನು ವ್ಯಕ್ತಪಡಿಸಿ, ಇದೇ ಜನವರಿ 91ರಂದು ಒಂದು ಅರ್ಜಿಯನ್ನು ತಮಗೆ, ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿ, ಒಂದು ಪ್ರತಿಯನ್ನು ನನಗೆ ಕಳುಹಿಸಿದ್ದಾರೆ. ಕಾರಣ ಈಗಲಾದರೂ ಸಹ ಸೇಡಂ ಮತಕ್ಷೇತ್ರದ ಆಂಧ್ರಗಡಿ ಪ್ರಾಂತ್ಯದ ರಸ್ತೆಗಳಿಗಾಗಿ ಗಡಿ ಪ್ರಾಂತ್ಯ ಅಭಿವೃದ್ಧಿ ಹಣದಲ್ಲಿ ಈ ಕೆಲಸವನ್ನು ಪ್ರಾರಂಭ ಮಾಡುವ ಆದೇಶ ನೀಡಲು ಸರ್ಕಾರದ ಗಮನವನ್ನು ಸೆಳೆಯುತ್ತಿದ್ದೇನೆ.

ಶ್ರೀ ಎಂ. ವೀರಪ್ಪ ಮೊಯಿಲಿ : (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೇ, ಮಾನ್ಯ ಸದಸ್ಯರು ಪ್ರಸ್ತಾಪ ಮಾಡಿರುವ ಸಮಸ್ಯೆಗಳು ಏನಿವೆ, ಆ ಪ್ರಾಂತ್ಯದ ಅಭಿವೃದ್ಧಿ ಬಗ್ಗೆ, ಅವುಗಳ ಬಗ್ಗೆ ಮಾನ್ಯ ಮುಖ್ಯ ಮಂತ್ರಿಗಳು ಸೂಕ್ತ ಕಾರ್ಯಕ್ರಮ ತೆಗೆದುಕೊಂಡು, ಆ ಬಗ್ಗೆ ವರದಿಯನ್ನು ತರಿಸಿ, ನಂತರ ಅದನ್ನು ಮಾನ್ಯ ಸದಸ್ಯರಿಗೆ ಕಳಿಸಿಕೊಡಲಾಗುವುದು.